ಬ) ಕ್ರಮ ತೆಗೆದುಕೊಳ್ಳಲಾಗಿರುವುದು.

ಪ್ರಧಾನ ಮಂತ್ರಿಗಳ ಗ್ರಾಮ ಸಡಕ್ ಯೋಜನೆಯಲ್ಲಿ ಬಿಡುಗಡೆಯಾದ ಹಣ.

1810(2600)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಪ್ರಧಾನ ಮಂತ್ರಿಗಳ ಗ್ರಾಮ ಸಡಕ್ ಯೋಜನೆಯಡಿ ಕರ್ನಾಟಕಕ್ಕೆ ಈವರೆಗೆ ಬಿಡುಗಡೆಯಾದ ಹಣವೆಷ್ಟು; ವರ್ಷವಾರು ಹಾಗೂ ಹಣ ಬಿಡುಗಡೆ ದಿನಾಂಕದ ವಿವರ ನೀಡುವುದು;

2. ಈ ಹಣವನ್ನು ಯಾವ ಯಾವ ಜಿಲ್ಲೆಗಳಲ್ಲಿ ವಿನಿಯೋಗ ಮಾಡಲಾಗಿದೆ; (ಕಾಮಗಾರಿಗಳ ಜಿಲ್ಲಾವಾರು ವಿವರ ನೀಡುವುದು)

3. ಜಿಲ್ಲಾ ಪಂಚಾಯತ್‌ಗಳಿಗೆ ಈ ಹಣವನ್ನು ಬಿಡುಗಡೆ ಮಾಡಿದ್ದು ಆ ಹಣವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡುವಂತೆ ಸರ್ಕಾರ ಆದೇಶ ನೀಡಿದೆಯೆ; ಮತ್ತು ಈ ಹಣ ಜಿಲ್ಲಾ ವಿಜ್ಞಾನಿಗಳಲ್ಲಿ ವಿನಿಯೋಗವಾಗಿದೆಯೆ;

4. ಹಾಗಿದ್ದಲ್ಲಿ ಇದಕ್ಕೆ ಕಾರಣವೇನು?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

1. ಪ್ರಧಾನ ಮಂತ್ರಿಗಳ ಗ್ರಾಮ ಸಡಕ್ ಯೋಜನೆಯಡಿ ಕರ್ನಾಟಕಕ್ಕೆ ರೂ.100.57 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. ಅವುಗಳ ವಿವರ ಈ ಕೆಳಗಿನಂತಿವೆ.

ದಿನಾಂಕ: 6-2-2001 ರೂ.2019.00 ಲಕ್ಷ

ದಿನಾಂಕ: 27-3-2001 ರೂ.8038.00 ಲಕ್ಷ

2. ಈ ಹಣವನ್ನು ಈವರೆಗೆ ವಿನಿಯೋಗ ಮಾಡಲಾಗಿಲ್ಲ.

3. ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ಆದೇಶ ನೀಡಿಲ್ಲ. ಜಿಲ್ಲಾ

ಪಂಚಾಯತ್ ಜಿಲ್ಲಾ ಖಜಾನೆಯಿಂದ ಹಣ ಡ್ರಾ ಮಾಡಿರುತ್ತವೆ.

4. ಈಗಾಗಲೇ ಉತ್ತರಿಸಲಾಗಿದೆ.

ಗ್ರಾಮೀಣ ಅಭಿವೃದ್ಧಿ ಇಲಾಖೆಗೆ ಕಳೆದ 2 ವರ್ಷಗಳಲ್ಲಿ ಒದಗಿಸಿರುವ ಅನುದಾನ.

1812(2602)

ಶ್ರೀ ಜಗದೀಶ್ ಶೆಟ್ಟರ್(ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣ ಅಭಿವೃದ್ಧಿ ಇಲಾಖೆಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮೊತ್ತವೆಷ್ಟು? (ವರ್ಷವಾರು ವಿವರ ನೀಡುವುದು)

ಆ. ಈ ಅನುದಾನದಲ್ಲಿ ಖರ್ಚು ಮಾಡಿರುವ ಹಣದ ಮೊತ್ತವೆಷ್ಟು: (ವರ್ಷವಾರು ವಿವರ ನೀಡುವುದು)

ಇ. ಗ್ರಾಮೀಣಾಭಿವೃದ್ಧಿ ಇಲಾಖೆಯ ಆಯವ್ಯಯದಲ್ಲಿ ಒದಗಿಸಿದ್ದ ಸಂಪೂರ್ಣ ಹಣವನ್ನು ಖರ್ಚು ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಇದಕ್ಕೆ ಕಾರಣವೇನು?

ಈ. ಹಾಗಿದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣ ಖರ್ಚಾಗದೆ ಉಳಿದಿದೆ (ವರ್ಷವಾರು ವಿವರ ನೀಡುವುದು)

ಉ. ಅನುದಾನ ಬಿಡುಗಡೆಯಾಗಿದ್ದರೂ ಖರ್ಚು ಮಾಡದೆ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಲು ಕಾರಣವಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ. ಕಳೆದ ಮೂರು ವರ್ಷಗಳಲ್ಲಿ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ (ಯೋಜನೆ ಮತ್ತು ಯೋಜನೇತರ ಸೇರಿ)